ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 208 ವರ್ಗಾವಣೆ 2017-18 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:24-05-2017

## ಸುತ್ತೋಲೆ

ವಿಷಯ: 2017-18ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಬೋಧಕ/ ಗ್ರಂಥಪಾಲಕರು/ದೈಹಿಕ ಶಿಕ್ಷಣ ಶಿಕ್ಷಕರು/ಬೋಧಕೇತರ ವರ್ಗಾವಣೆಯ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆ ಸುತ್ತೋಲೆಗಳು ದಿನಾಂಕ:22-04-2017 & 12-05-2017.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸುತ್ತೋಲೆಗಳನ್ವಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವೃಂದದ ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗಿದ್ದು, ದಿನಾಂಕ:15-05-2017, 17-05-2017 ಹಾಗೂ 18-05-2017 ರಂದು ಬೋಧಕ/ಗ್ರಂಥಪಾಲಕರು/ದೈಹಿಕ ಶಿಕ್ಷಣ ಶಿಕ್ಷಕರುಗಳಿಗೆ ಸಂಬಂಧಿಸಿದಂತೆ ಕಡ್ಡಾಯ ವರ್ಗಾವಣೆಯ ಕೌನ್ಸಿಲಿಂಗ್ ನಡೆಸಲಾಗಿರುತ್ತದೆ. ಶ್ರೀ.ಯು.ವಿ.ಚಂದರಗಿ ಹಾಗೂ ಇತರರು ಸದರಿ ವರ್ಗಾವಣೆಯನ್ನು ಪ್ರಶ್ನಿಸಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ:2702-2751/2017 ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:18-05-2017ರಂದು ವರ್ಗಾವಣೆ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿರುತ್ತದೆ. ದಿನಾಂಕ:25-05-2017ರಂದು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ವಿಚಾರಣೆ ಬಾಕಿಯಿದ್ದು, ಪ್ರಸ್ತುತ ವರ್ಗಾವಣೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿರುತ್ತದೆ. ಮಾನ್ಯ ನ್ಯಾಯಾಲಯದ ಆದೇಶದನ್ವಯ ಮುಂದಿನ ಕ್ರಮ ಜರುಗಿಸಲಾಗುವುದು ಹಾಗೂ ಈ ಬಗ್ಗೆ ಇಲಾಖಾ ವೆಬ್ ಸೈಟ್‌ನಲ್ಲಿ ಮಾಹಿತಿಗಳನ್ನು ಪ್ರಕಟಿಸಲಾಗುವುದು.

*(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)*

Sd/-

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

ಇವರಿಗೆ:

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿಗಾಗಿ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

DCE 208 Circular-1